**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.**

**ಸಿಸಿ ನಂ.472/2025**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ

-ಃಃ ವಿರುದ್ಧ ಃಃ-

ಆರೋಪಿ ಃ ನಾಗರೆಡ್ಡಿ ತಂದೆ ಮಲ್ಲರೆಡ್ಡಿ ತಿಪ್ಪರೆಡ್ಡಿಕರ್
ವಃ 35 ವರ್ಷ, ಉಃ ಒಕ್ಕಲುತನ (ನ್ಯಾಯಬೆಲೆ ಅಂಗಡಿಯ ಮಾಲಿಕ)
ಸಾಃ ನಾಚವಾರ ಗ್ರಾಮ, ತಾಃ ಸೇಡಂ .

----

**ದೋಷಾರೋಪಣೆ**

ನಾನು **ಶ್ರೀ ಬಾಲು,** ಬಿಎ., ಎಲ್.ಎಲ್.ಬಿ., ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರು, ಸೇಡಂ, ನಿಮ್ಮ ಮೇಲೆ ಹೊರಿಸುವ ಆರೋಪವೇನೆಂದರೆ,

ದಿನಾಂಕ 17-05-2024 ರಂದು ಮಧ್ಯಾಹ್ನ 03-15 ಗಂಟೆ ಸುಮಾರಿಗೆ ಸೇಡಂ ಪಟ್ಟಣದ ತಹಸೀಲ್ ಆಫೀಸ್ ಮುಂದುಗಡೆ ಖುಲ್ಲಾ ಜಾಗದಲ್ಲಿ ಚಾಸಾ.1 ನೇದ್ದವನು ನಾಚವಾರ ಗ್ರಾಮದ ನ್ಯಾಯಬೆಲೆ ಅಂಗಡಿ ಸಂ.41 ನೇದ್ದರ ವಿತರಕರಾದ ಆರೋಪಿ.1 ನೇದ್ದವನಿಗೆ ನೋಟೀಸ್ ಜಾರಿ ಮಾಡಲು ಹೋದಾಗ ಆರೋಪಿತನು ಚಾಸಾ.1 ನೇದ್ದವನೊಂದಿಗೆ ಜಗಳ ತೆಗೆದು ಕರ್ತವ್ಯಕ್ಕೆ ಅಡ್ಡಿಪಡಿಸಿದ್ದು, ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ.ಕಲಂ 353 ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಎರಡನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ, ಆರೋಪಿತನು ಚಾಸಾ.1ರವರೊಂದಿಗೆ ಜಗಳ ತೆಗೆದು ಭೋಸಡಿ ಮಗನೆ, ರಂಡಿ ಮಗನೆ ನೀನು ಯಾರಲೆ ನನಗೆ ಹೇಳುವವನು ನನ್ನ ಸೆಂಟಾ ಎನು ಕಿತ್ತಿಕೊಳ್ಳುತ್ತಿ ಎಂದು ಮನಬಂದಂತೆ ಅವಾಚ್ಯ ಶಬ್ದಗಳಿಂದ ಬೈದು ಸಾರ್ವಜನಿಕ ಶಾಂತತೆಗೆ ಭಂಗ ಉಂಟು ಮಾಡಿದ್ದು, ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ.ಕಲಂ 504 ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕೊನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ, ಆರೋಪಿತನು, ಚಾಸಾ.1 ರವರೊಂದಿಗೆ ಜಗಳ ತೆಗೆದು ನನ್ನ ಲೈಸನ್ಸ ಏನಾದರು ಅಮಾನತ್ತಾದರೆ ನಿನಗೆ ಇಲ್ಲಿಯೇ ಖಲಾಸ್ ಮಾಡುತ್ತೇನೆಂದು ಆತನಿಗೆ ಕೊಲೆ ಬೆದರಿಕೆ ಹಾಕಿದ್ದು, ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ. ಕಲಂ 506ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕಾರಣ ಮೇಲೆ ಹೇಳಿದ ಅಪರಾಧಗಳಿಗಾಗಿ ವಿಚಾರಣೆ ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

ಸಹಿ/-

ದಿನಾಂಕಃ 27-11-2025 ಪ್ರ.ದ.ನ್ಯಾ .ದಂ. ಸೇಡಂ.

**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.**

**ಸಿಸಿ ನಂ.472/2025**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ,

-ಃಃ ವಿರುದ್ದ ಃಃ-

ಆರೋಪಿ ಃ ನಾಗರೆಡ್ಡಿ ತಂದೆ ಮಲ್ಲರೆಡ್ಡಿ ತಿಪ್ಪರೆಡ್ಡಿಕರ್
ವಃ 35 ವರ್ಷ, ಉಃ ಒಕ್ಕಲುತನ (ನ್ಯಾಯಬೆಲೆ ಅಂಗಡಿಯ ಮಾಲಿಕ)
ಸಾಃ ನಾಚವಾರ ಗ್ರಾಮ, ತಾಃ ಸೇಡಂ .

**ಆರೋಪಿತರ ಹೇಳಿಕೆ**

ಪ್ರಃ-1) ಈ ಓದಿ ಹೇಳಲಾದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿರುವಿರಾ?

ಉಃ-

ಪ್ರಃ-2) ನಿಮ್ಮ ತಪ್ಪನ್ನು ಒಪ್ಪಿಕೊಳ್ಳುತ್ತಿರೊ ಅಥವಾ ವಿಚಾರಣೆ ನಡೆಯಬೇಕಾ?

ಉಃ-

(ದೋಷಾರೋಪಣೆಯನ್ನು ಆರೋಪಿತರಿಗೆ ಓದಿ ಹೇಳಿದ್ದು, ಅವರು ನೀಡಿದ ಹೇಳಿಕೆಯನ್ನು ಯಥಾವತ್ತಾಗಿ ದಾಖಲಿಸಿದ್ದು, ಅದು ಸಂಪೂರ್ಣ ಸತ್ಯವಾಗಿರುತ್ತದೆಂದು ಪ್ರಮಾಣೀಕರಿಸುತ್ತೇನೆ)

ಸಹಿ/-

ದಿನಾಂಕಃ 27-11-2025 ಪ್ರ.ದ.ನ್ಯಾ.ದಂ. ಸೇಡಂ.